# ನೇಮಕಾತಿ-2015

# ನಾಗರಿಕ ಪೊಲೀಸ್ ಕಾನ್ಸ್‌ಟೇಬಲ್( ಪುರುಷ ಮತ್ತು ಮಹಿಳೆ) ಹುದ್ದೆಗೆ ಅರ್ಜಿ - 2015

(ಹೈದ್ರಾಬಾದ್ ಕರ್ನಾಟಕ ಪ್ರದೇಶದ ಮೀಸಲಾತಿ ಹೊಂದಿರುವ ಅರ್ಹ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು)

## ನಾಗರಿಕ ಪೊಲೀಸ್ ಕಾನ್ಸ್‌ಟೆಬಲ್(ಪುರುಷ ಮತ್ತು ಮಹಿಳೆ) (ಹೈದ್ರಾಬಾದ್ -ಕರ್ನಾಟಕ ಪ್ರದೇಶ) ಹುದ್ದೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು.

- ಅರ್ಜಿಗಳನ್ನು ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.
- ಅರ್ಜಿದಾರರು ಅಧಿಸೂಚನೆಯಲ್ಲಿ ನೀಡಲಾಗಿರುವ ಮೀಸಲಾತಿ ವರ್ಗೀಕರಣವನ್ನು ನೋಡಿ ಅರ್ಜಿ ಸಲಿಸುವಂತೆ ಸೂಚಿಸಲಾಗಿದೆ.
- **ಆನ್-ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ** :

ಅರ್ಜಿದಾರ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ಮೊದಲಿಗೆ ಭರ್ತಿ ಮಾಡುವ ಮುನ್ನ ಮಾಹಿತಿಸೂಚಿ/ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿಮಾಡಬೇಕು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರವನ್ನು ಮತ್ತು ಸಹಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ ಮತ್ತು ಇತ್ಯಾದಿ ವಿವರಗಳನ್ನು ಭರ್ತಿಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ ಮತ್ತು ಸಹಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿ ತ್ರಿಪತಿ

(Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಘಟಕ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತದೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

- ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿಯೇ ಅಧಿಕೃತ ಎಸ್.ಬಿ.ಎಂ ಅಥವಾ ಎಸ್.ಬಿ.ಹೆಚ್ ಬ್ಯಾಂಕ್ ಶಾಖೆಗಳಲ್ಲಿ ಪಾವತಿಸಬೇಕಾಗಿರುತ್ತದೆ. ಶುಲ್ಕ ಪಾವತಿಸಿದ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದು.
- ಅಭ್ಯರ್ಥಿಯ ಶುಲ್ಕ ಪಾವತಿಸಿದ ಮರುದಿನ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ My Application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರವೇ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಭರ್ತಿ ಮಾಡಿದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.
- ಆನ್-ಲೈನ್ ಮುಖಾಂತರ ದಿನಾಂಕ: 29.06.2015 ರಂದು ಬೆಳಗ್ಗೆ 10-00 ಗಂಟೆಯಿಂದ ದಿನಾಂಕ:28.07.2015ರ ಸಂಜೆ 06.00 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸಲು ದಿನಾಂಕ: 29/07/2015 ರಂದು ಕೊನೆಯ ದಿನಾಂಕವಾಗಿರುತ್ತದೆ. ಒಳಗೆ ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು. ಒಂದು ದಿನದ ನಂತರ ಇಂಟರ್‌ನೆಟ್‌ನ್ನು ವೀಕ್ಷಿಸಬೇಕು. ಅರ್ಹಗೊಳ್ಳದಿದ್ದಲ್ಲಿ ಶುಲ್ಕ ಪಾವತಿಸಿದ ಬ್ಯಾಂಕ್‌ನ್ನು ಸಂಪರ್ಕಿಸತಕ್ಕದ್ದು.

- ನೇಮಕಾತಿಗೆ ಸಂಬಂಧಪಟ್ಟ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನ "MY APPLICATION" ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ. ಉದಾಹರಣೆ: ಅರ್ಜಿ ಯಶಸ್ವಿಯಾಗಿರುವ ಕುರಿತು ಅರ್ಹತಾ ಪಟ್ಟಿ, ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಕರೆಪತ್ರ/ಲಿಖಿತ ಪರೀಕ್ಷೆಯ ದಿನಾಂಕ, ಕರೆಪತ್ರಗಳು/ವೈದ್ಯಕೀಯ ಪರೀಕ್ಷೆಯ ದಿನಾಂಕ, ಕರೆಪತ್ರಗಳು ಇತ್ಯಾದಿ,

- ಅರ್ಜಿದಾರರನು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಲು ಗಣಕಯಂತ್ರದಲ್ಲಿ ಅಂತರ್ಜಾಲದ SOFTWARE , Internet Explorer 8 or 9, or Google Chroma or Firefox ಆಳವಡಿಸಿಕೊಂಡಿರಬೇಕು. ಅರ್ಜಿಯ ಚಲನ್ ಮತ್ತು ನೋಂದಾಯಿಸಿದ ಅರ್ಜಿಯ ಪ್ರತಿಯನ್ನು ಗಣಕಯಂತ್ರದಲ್ಲಿ ಪಡೆಯಲು PDF Software ಆಳವಡಿಸಿಕೊಂಡಿರಬೇಕು.

- ಗಣಕಯಂತ್ರದ ಪರದೆಯ ಮೇಲೆ ಚಿತ್ತರಿಸಿರುವ ಕನ್ನಡದ ಅಕ್ಷರಗಳು ನುಡಿ ತಂತ್ರಾಂಶವನ್ನು ಬಳಸಿ ಬರೆಯಲಾಗಿದೆ, ಕನ್ನಡ ಅಕ್ಷರಗಳು ಗಣಕಯಂತ್ರದಲ್ಲಿ JUNK CHARACTER ರೂಪದಲ್ಲಿ ಗಣಕಯಂತ್ರದ ಪರದೆಯ ಮೇಲೆ ಮೂಡಿದರೆ, ಅದನ್ನು ಸರಿಪಡಿಸಲು ಗಣಕಯಂತ್ರದಲ್ಲಿ NUDI SOFTWARE ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

- ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಿದ ನಂತರ ನಿಗದಿತ ಶುಲ್ಕ ಪಾವತಿಸಲು ಸೃಜನೆಯಾಗುವ ಬ್ಯಾಂಕ್ ಚಲನ್ ಮತ್ತು ಪೂರ್ಣಗೊಳಸಿದ ಅರ್ಜಿಯನ್ನು ಗಣಕಯಂತ್ರದ ಪರದೆಯ ಮೇಲೆ ಚಿತ್ತರಿಸಲು ಗಣಕಯಂತ್ರದಲ್ಲಿ PDF Reader Software ಅಳವಡಿಸಿರಬೇಕು. ಇಲ್ಲದಿದ್ದಲ್ಲಿ PDF Reader Software ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

- **ಅರ್ಜಿ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ ಹಾಗೂ ಶುಲ್ಕ ಪಾವತಿಸಲು ಕೊನೆಯ ದಿನಾಂಕ:**
  1. **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 29/06/2015, ಬೆಳಗ್ಗೆ 10:00 ಗಂಟೆಯಿಂದ.**
  2. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 28/07/2015, ಸಂಜೆ 06:00 ಗಂಟೆವರೆಗೆ.**
  3. **ಶುಲ್ಕವನ್ನು ಅಧಿಕೃತ ಬ್ಯಾಂಕ್ ಶಾಖೆಗಳ ಕಛೇರಿ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 29/07/2015.**

- ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸುವುದು.
- ಅರ್ಜಿ ಪೂರ್ಣಗೊಳಸಿದ ನಂತರ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸುವಂತೆ ಸೂಚಿಸಲಾಗಿದೆ.

- ಶುಲ್ಕ ಪಾವತಿಸಿದ ಮರುದಿನ/ಎರಡು ದಿನದ ನಂತರ ಅರ್ಜಿಯ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಲು ಸೂಚಿಸಲಾಗಿದೆ.
- ಶುಲ್ಕವನ್ನು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು (ಎಸ್‌ಬಿಎಂ)ನಲ್ಲಿ ಮತ್ತು ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್(ಎಸ್‌ಬಿಹೆಚ್) ನಲ್ಲಿ ಪಾವತಿಸತಕ್ಕದ್ದು.
- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆ ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080-2294-3346ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿಯನ್ನು ಸಲ್ಲಿಸಬಹುದು.
- ನಿಗದಿತ ದಿನಾಂಕದ ನಂತರ ಶುಲ್ಕವನ್ನು ಪಾವತಿಸಿದ ಅರ್ಜಿದಾರರ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಸ್ಟೇಟ್ ಬ್ಯಾಂಕ್ ಅಫ್ ಮೈಸೂರು ಮತ್ತು ಸ್ಟೇಟ್ ಬ್ಯಾಂಕ್ ಆಫ್ ಹೈದ್ರಾಬಾದ್ ಹೊರತು ಪಡಿಸಿ ಬೇರೆ ಯಾವುದೇ ಬ್ಯಾಂಕನಲ್ಲಿ ಹಣ ಪಾವತಿಸತಕ್ಕದ್ದಲ್ಲ.
- ಅರ್ಜಿ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಆನ್‌ಲೈನ್ ಮೂಲಕ ಅಗತ್ಯ ಮಾಹಿತಿ ತುಂಬಿ ಬ್ಯಾಂಕ್ ಚಲನ್‌ನ್ನು ಸೃಜಿಸಿ, ಆನ್‌ಲೈನ್‌ನಲ್ಲಿ ಡೌನ್ ಲೋಡ್ ಮಾಡಿದ ಚಲನ್ ಮೂಲಕ ಮಾತ್ರವೇ ಸ್ಟೇಟ್ ಬ್ಯಾಂಕ್ ಅಫ್ ಮೈಸೂರು / ಸ್ಟೇಟ್ ಬ್ಯಾಂಕ್ ಆಫ್ ಹೈದ್ರಾಬಾದ್‌ನಲ್ಲಿ ಶುಲ್ಕ ಪಾವತಿಸಬಹುದಾಗಿದೆ. ಬೇರ್‍ಯಾವುದೇ ಬ್ಯಾಂಕಿನಲ್ಲಿ ಹಣ ಪಾವತಿಸಲು ಅವಕಾಶವಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ಯಾವುದೇ ಸ್ವರೂಪದಲ್ಲಿ ಶುಲ್ಕ ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
- ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಗಳಿಗೂ ಹಿಂದಿರುಗಿಸಲಾಗುವುದಿಲ್ಲ.
- ಮೀಸಲಾತಿ ಕೋರುವ ಪ್ರಮಾಣ ಪತ್ರಗಳು ಅಧಿಸೂಚನೆಯಲ್ಲಿ ನಮೂದಿಸಿರುವಂತಹ ನಿಯಮಗಳ ನಮೂನೆಯಲ್ಲಿಯೇ ಇರಬೇಕು. ಸದರಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.
- ಯಾವುದೇ ದಾಖಲೆಗಳನ್ನು ಅಂಚೆ ಮೂಲಕವಾಗಲಿ ಅಥವಾ ಮುದ್ದಾಂ ಆಗಿ ಸಲ್ಲಿಸತಕ್ಕದ್ದಲ್ಲ.
- ಮೀಸಲಾತಿಯನ್ನು ಕೋರ ಬಯಸುವ ಅರ್ಜಿದಾರರುಗಳು ಆನ್‌ಲೈನ್ ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು. ಅಂಕಣವನ್ನು ಖಾಲಿ ಬಿಟ್ಟಿದ್ದಲ್ಲಿ ಸಾಮಾನ್ಯ ವರ್ಗ ಎಂದು ಪರಿಗಣಿಸಲಾಗುವುದು. ನಂತರ ಯಾವುದೇ ಹಂತದಲ್ಲಿ

ಮೀಸಲಾತಿಯನ್ನು ಸೇರ್ಪಡೆ ಮಾಡಲು ಅವಕಾಶವಿರುವುದಿಲ್ಲ. ಒಂದು ವೇಳೆ ತಪ್ಪಾಗಿ ನಮೂದಿಸಿದ್ದರೆ, ನಂತರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅರ್ಜಿದಾರರುಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು.

- ಆಯ್ಕೆಯಾಗಿರುವ ಎಲ್ಲಾ ಅರ್ಹ ಅಭ್ಯರ್ಥಿಗಳು ದಾಖಲೆ ಪರಿಶೀಲನೆ ಸಮಯದಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಹಾಗೂ ನಿಗದಿತ ಶುಲ್ಕವನ್ನು ಪಾವತಿಸಿರುವ ಚಲನ್‌ನ ಅಭ್ಯರ್ಥಿ ಮತ್ತು ನೇಮಕಾತಿ ಪ್ರತಿಯನ್ನು ತಪ್ಪದೇ ಹಾಜುರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ದಾಖಲೆ ಪರಿಶೀಲನೆಗೆ ಪರಿಗಣಿಸಲಾಗುವುದಿಲ್ಲ.
- ನಿಗದಿತ ಶುಲ್ಕವನ್ನು ಬ್ಯಾಂಕ್‌ನಲ್ಲಿ ಪಾವತಿಸಿದ ನಂತರ, ಬ್ಯಾಂಕ್ ಸಿಬ್ಬಂದಿಯವರು ಬ್ರಾಂಚ್‌ಕೋಡ್, ಜರ್ನಲ್ ಸಂಖ್ಯೆ, ಶುಲ್ಕ ಸಂದಾಯವಾದ ದಿನಾಂಕ ಮತ್ತು ಶುಲ್ಕ ಸ್ವೀಕರಿಸಿರುವವರ ಸಹಿಯೊಂದಿಗೆ ಮಾಹಿತಿಯನ್ನು ಸರಿಯಾಗಿ ನಮೂದಿಸಿರುವರೆಂದು ಅರ್ಜಿದಾರರು ಖಾತ್ರಿ ಪಡಿಸಿಕೊಳ್ಳಲು ಸೂಚಿಸಲಾಗಿದೆ.

**ಅರ್ಜಿ ಸಲ್ಲಿಸ ಬಯಸುವ ಅರ್ಜಿದಾರರುಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ (28/07/2015) ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿರ ತಕ್ಕದ್ದು ಹಾಗೂ ಚಾಲ್ತಿಯಲ್ಲಿರಬೇಕು:**

- ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿ.
- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ.
- ಸರ್ಕಾರಿ ಇಲಾಖೆಯಲ್ಲಿ (ರಾಜ್ಯಸರ್ಕಾರದ ಅಥವಾ ಕೇಂದ್ರ ಸರ್ಕಾರದ)/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ /ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾವತಿಯಿಂದ ನೀಡಲಾಗುವ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ / ನಿರಾಪೇಕ್ಷಣ ಪ್ರಮಾಣಪತ್ರ.
- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಕೋರುವ ಅರ್ಜಿದಾರರುಗಳು ತಹಶೀಲ್ದಾರ್‌ರಿಂದ ಪಡೆದ ನಮೂನೆ ಡಿ/ಇ/ಎಫ್ ಪ್ರಮಾಣ ಪತ್ರಗಳು.

- ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅರ್ಜಿದಾರರುಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.
- ಮಾಜಿಸೈನಿಕ ಮೀಸಲಾತಿ ಕೋರುವ ಮಾಜಿ ಸೈನಿಕ ಅರ್ಜಿದಾರರುಗಳು ಸೈನ್ಯ ವಿಯೋಜನೆ ಪ್ರಮಾಣಪತ್ರ/ನಿರಾಪೇಕ್ಷಣಾ ಪ್ರಮಾಣಪತ್ರ ( Discharge Certificate/NOC)
- ಮಾಜಿ ಸೈನಿಕರು ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ, ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪಡೆದ ಪ್ರಮಾಣಪತ್ರ.
- ಗ್ರಾಮೀಣ ಮೀಸಲಾತಿ ಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರುವ ಪ್ರಮಾಣಪತ್ರ.
- ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟುಕೊಂಡಿರುವ ಪ್ರಮಾಣಪತ್ರ.
- ಸ್ಥಳೀಯ ವ್ಯಕ್ತಿಯೆಂಬ ಹೈದರಾಬಾದ್ – ಕರ್ನಾಟಕ ಪ್ರದೇಶದ ಮೀಸಲಾತಿಯನ್ನು ಕ್ಲೇಮು ಮಾಡುವ ಯಾವುದೇ ವ್ಯಕ್ತಿ ಸಕ್ಷಮ ಪ್ರಾಧಿಕಾರವು ನೀಡುವ ಅರ್ಹತಾ ಪ್ರಮಾಣ ಪತ್ರವನ್ನು ಪಡೆದುಕೊಳ್ಳತಕ್ಕದ್ದು . ಅವು (1) ಜನನ ಪ್ರಮಾಣಪತ್ರ ಅಥವಾ (2) ವಾಸಸ್ಥಳ ಪ್ರಮಾಣಪತ್ರ, ಅಥವಾ (3) ವ್ಯಾಸಂಗ ಪ್ರಮಾಣಪತ್ರ, ಅಥವಾ (4) ವಿವಾಹ ಪ್ರಮಾಣಪತ್ರ, ಅಥವಾ (5) ಸ್ವಗ್ರಾಮ ಪ್ರಮಾಣಪತ್ರ, ಅಥವಾ (6) ವಾರಸ ಪ್ರಮಾಣಪತ್ರವನ್ನು , ಅಂತಿಮವಾಗಿ ಮಾನ್ಯ ಉಪ ವಿಭಾಗಾಧಿಕಾರಿಯವರಿಂದ ಪಡೆದಿರುವ (ಹೈದ್ರಾಬಾದ್ –ಕರ್ನಾಟಕ 371(ಜೆ) ಮೀಸಲಾತಿ ಪ್ರಮಾಣಪತ್ರವನ್ನು) ನಿಗದಿ ಪಡಿಸಿದ ದಿನಾಂಕದೊಳಗಿರಬೇಕು.
- ಮಾಹಿತಿ ಭರ್ತಿ ಮಾಡುವ ಮುನ್ನ ಬಿಳಿ ಹಾಳೆಯ ಮೇಲೆ ತಮ್ಮ ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಪ್ರತ್ಯೇಕವಾಗಿ Scan ಮಾಡಿಕೊಂಡಿರತಕ್ಕದ್ದು.

ಭಾವಚಿತ್ರ (ಕಲರ್) : 400 X 400 pixel, size > 250KB

ಸಹಿ ( ಕಪ್ಪು ಶಾಯಿ) : 400X 100 pixel, size > 250 KB
gif, jpg, jpeg and png ಫಾರಮೆಟ್‌ನಲ್ಲಿರ ತಕ್ಕದ್ದು.

ಟಿಪ್ಪಣಿ:-ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ/ಪಡೆಯುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳು ವುದಿಲ್ಲ .

**ಪ್ರಮುಖವಾದ ಸೂಚನೆಗಳು:**

- ಅರ್ಹಗೊಂಡ ಅಭ್ಯರ್ಥಿಗಳಿಗೆ ಅಂಚೆ ಮುಖಾಂತರ ಕರೆಪತ್ರವನ್ನು ರವಾನಿಸಲಾಗುವುದಿಲ್ಲ. ವೆಬ್‌ಸೈಟ್ ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ.
- ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಯಾವುದೇ ಹಂತದಲ್ಲೂ ಮಾಹಿತಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ .
- ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ವಿದ್ಯಾರ್ಹತೆಯ ಅಂಕಣದಲ್ಲಿ ಅಭ್ಯರ್ಥಿಗಳು ಗರಿಷ್ಠ ಅಂಕಗಳು ಮತ್ತು ಗಳಿಸಿದ ಅಂಕವನ್ನು ಪಿಯುಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಯಲ್ಲಿರುವಂತೆ ಅಂಕಗಳನ್ನು ಮಾತ್ರ ನಮೂದಿಸಬೇಕು ಹೆಚ್ಚಿನ ವಿದ್ಯಾರ್ಹತೆಯ (Degree or Higher Qualification) ಅಂಕಗಳನ್ನು ನಮೂಸಿತಕ್ಕದಲ್ಲ.
- ಒಂದು ವೇಳೆ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ತಿದ್ದುಪಡಿ ಮಾಡುವ ಅಗತ್ಯತೆ ಕಂಡು ಬಂದಲ್ಲಿ ಹೊಸ ಅರ್ಜಿಯನ್ನು ಶುಲ್ಕ ಪಾವತಿಸಿ ಸಲ್ಲಿಸತಕ್ಕದ್ದು.
- ಆನ್‌ಲೈನ್ ಮೂಲಕ ಅರ್ಜಿಯಲ್ಲಿ ಸಲ್ಲಿಸಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟುಕೊಂಡು ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದರಿಂದ ಯಾವುದೇ ಹಂತದಲ್ಲಿ ಅಭ್ಯರ್ಥಿಯು ನೀಡಿದ ಮಾಹಿತಿಯು ಅಪೂರ್ಣ/ ಅಸ್ಪಷ್ಟ / ತಪ್ಪು ಎಂದು ಕಂಡು ಬಂದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.
- ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಮ್ಮೆ ಅದೇ ಕೇಂದ್ರದಲ್ಲಿ ದೈಹಿಕ

ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತುಕ್ರಮಕ್ಕೆ ಒಳ ಪಡುವುದಲ್ಲದೇ ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**<u>ಹೈದ್ರಾಬಾದ್ –ಕರ್ನಾಟಕ ಪ್ರದೇಶಕ್ಕೆ ಮೀಸಲಿರುವ ಹುದ್ದೆಗೆ ಕ್ಲೇಮು</u>**

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಯಾವುದೇ ವ್ಯಕ್ತಿ ಸಕ್ಷಮ ಪ್ರಾಧಿಕಾರವು ನೀಡುವ ಅರ್ಹತಾ ಪ್ರಮಾಣ ಪತ್ರವನ್ನು ಪಡೆದುಕೊಳ್ಳತಕ್ಕದ್ದು ಮತ್ತು ತಾನು ಸ್ಥಳೀಯ ವ್ಯಕ್ತಿಯೆಂದು ಮಾಡಿದ ಕ್ಲೇಮನ್ನು ರುಜುವಾತುಪಡಿಸಲು ಅರ್ಹತಾ ಪ್ರಮಾಣ ಪತ್ರವನ್ನು ನೀಡಲು ಈ ಮುಂದಿನ ಪ್ರಮಾಣ ಪತ್ರಗಳನ್ನು ಆಧಾರವಾಗಿಟ್ಟುಕೊಂಡಿರಬೇಕು ಮತ್ತು ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

ಎ) ಜನನ ಪ್ರಮಾಣ ಪತ್ರ, ಅಥವಾ ಬಿ) ವಾಸಸ್ಥಳ ಪ್ರಮಾಣ ಪತ್ರ, ಅಥವಾ ಸಿ) ವ್ಯಾಸಂಗ ಪ್ರಮಾಣ ಪತ್ರ, ಅಥವಾ ಡಿ) ವಿವಾಹ ಪ್ರಮಾಣ ಪತ್ರ, ಅಥವಾ ಇ) ಸ್ವಗ್ರಾಮ (ಅಥವಾ ಸ್ಥಳ) ಪ್ರಮಾಣ ಪತ್ರ, ಅಥವಾ ಎಫ್) ವಾರಸ ಪ್ರಮಾಣ ಪತ್ರ ಅಥವಾ

ಜಿ) ಈ ಮೇಲಿನ ಪ್ರಮಾಣ ಪತ್ರಗಳ ಒಂದು ಅಥವಾ ಹೆಚ್ಚಿನ ಸಂಯೋಜನೆಯೊಂದಿಗೆ ಅಂತಿಮವಾಗಿ ಮಾನ್ಯ ಉಪ ವಿಭಾಗಾಧಿಕಾರಿಯವರಿಂದ ಪಡೆದಿರುವ (ಹೈದ್ರಾಬಾದ್ –ಕರ್ನಾಟಕ 371(ಜೆ) ಮೀಸಲಾತಿ ಪ್ರಮಾಣಪತ್ರವನ್ನು) ನಿಗದಿ ಪಡಿಸಿದ ದಿನಾಂಕದೊಳಗಿರಬೇಕು.

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.**

| | | |
|---|---|---|
| ಎ) | ಸ್ಥಳೀಯ ಪೊಲೀಸ್ ಕಾನ್ಸ್‌ಟೇಬಲ್ ನಾಗರಿಕ (ಪುರುಷ) | **392** |
| ಬಿ) | ಸ್ಥಳೀಯ ಪೊಲೀಸ್ ಕಾನ್ಸ್‌ಟೇಬಲ್ ನಾಗರಿಕ (ಮಹಿಳಾ) | **98** |
| **ಒಟ್ಟು** | | **490 ಹುದ್ದೆಗಳು** |

(ಖಾಲಿ ಹುದ್ದೆಗಳ ವರ್ಗೀಕರಣಕ್ಕೆ ಅನುಬಂಧ–'ಎ' ಅನ್ನು ನೋಡಿ)

ಸೂಚನೆ: ಸ್ಥಳೀಯ ಪೊಲೀಸ್ ಕಾನ್ಸ್‌ಟೇಬಲ್ (ನಾಗರಿಕ) (ಪುರುಷ & ಮಹಿಳಾ) ಹುದ್ದೆಗೆ ಅರ್ಜಿ ಸಲ್ಲಿಸುವ /ಮೀಸಲಾತಿ ಕೋರುವ ಅಭ್ಯರ್ಥಿಗಳನ್ನು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಸ್ಥಳೀಯೇತರ ಅಭ್ಯರ್ಥಿಗಳು ಅರ್ಜಿ

ಸಲ್ಲಿಸಿದರೆ ಸದರಿ ಹುದ್ದೆಗೆ ಪರಿಗಣಿಸಲಾಗುವುದಿಲ್ಲ ಹಾದಗಿಯೂ ಅರ್ಜಿ ಸಲ್ಲಿಸಿದರೆ ಅಂತರವರ ವಿರುದ್ದ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.

ಸದರಿ ನೇರ ನೇಮಕಾತಿಯಲ್ಲಿ ಒಮ್ಮೆ ಸ್ಥಳೀಯ ವ್ಯಕ್ತಿಯೆಂದು ಮೀಸಲಾತಿಯಲ್ಲಿ ಕ್ಲೇಮ್ ಮಾಡಿದ ನಂತರ ಅವರನ್ನು ಆ ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ಮೀಸಲಿರುವ ಹುದ್ದೆಯ ವರ್ಗೀಕರಣದ ಅಡಿಯಲ್ಲಿ ಅರ್ಹತಾನುಸಾರವಾಗಿ ಪರಿಗಣಿಸಿ ಆಯ್ಕೆಪಟ್ಟಿಯನ್ನು ತಯಾರಿಸಲಾಗುವುದು ಮತ್ತು ಕೋರಿರುವ ಮೀಸಲಾತಿ ಪ್ರಮಾಣಪತ್ರವು ನೈಜತೆಯಿಲ್ಲದೆ ಅಥವಾ ಸಂಬಂಧಪಟ್ಟ ಪ್ರಾಧಿಕಾರದಿಂದ ತಿರಸ್ಕರಿಸಲ್ಪಟ್ಟರೆ ಅವರನ್ನು ಅರ್ಹತಾ ಪಟ್ಟಿಯಿಂದ ಕೈಬಿಡಲಾಗುವುದು ಮತ್ತು ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಹೈದರಾಬಾದ್ – ಕರ್ನಾಟಕ ಪ್ರದೇಶ ಮೀಸಲಾತಿಯನ್ನು ಹೊರತು ಪಡಿಸಿ ಮೀಸಲಿರಿಸಿರದ ಹುದ್ದೆಗಳಿಗೆ ಆಯ್ಕೆ ಬಯಸುವಾಗ ಎಚ್ಚರಿಕೆಯಿಂದ ಅರ್ಜಿ ಸಲ್ಲಿಸುವುದು.